*3. ಪ್ರಸ್ತುತ ಈ ಕೇಂದ್ರದಲ್ಲಿ ಉತ್ಪಾದನೆ ಚಟುವಟಿಕೆ ಸ್ಥಗಿತಗೊಳ್ಳಲು ಕಾರಣವೇನು?*

*4. ಮಂಡ್ಯ ಜಿಲ್ಲೆಯ ಅವಶ್ಯಕತೆ ಪೂರೈಸಲು ಪರ್ಯಾಯ ಕ್ರಮ ಕೈಗೊಳ್ಳಲಾಗಿದೆಯೇ?*

ಶ್ರೀ ಬಿ. ರಮಾನಾಥ್ ರೈ (ಮೀನುಗಾರಿಕೆ, ಬಂದರು ಮತ್ತು ಪ್ರದೇಶಾಭಿವೃದ್ಧಿ ಸಚಿವರು) :

1. ಹೌದು.

2. 4.00 ಲಕ್ಷ ಪ್ಲೈ ಮೀನು ಮರಿಗಳನ್ನು ಉತ್ಪಾದನೆ ಮಾಡಲಾಗಿದೆ.

3. ಪ್ರಸ್ತುತ ಈ ಕೇಂದ್ರದಲ್ಲಿ ಉತ್ಪಾದನಾ ಚಟುವಟಿಕೆ ಸ್ಥಗಿತಗೊಂಡಿರುವುದಿಲ್ಲ.

4. ಅಗತ್ಯವಿರುವ ಮೀನು ಮರಿಗಳನ್ನು ಸದ್ಯಕ್ಕೆ ಇಲಾಖಾ ಮೀನು ಮರಿ ಉತ್ಪಾದನಾ ಕೇಂದ್ರ ಮತ್ತು ಅನುಮೋದಿತ ಖಾಸಗಿ ಮೀನು ಮರಿ ಉತ್ಪಾದನಾ ಕೇಂದ್ರಗಳಿಂದ ಖರೀದಿಸಿ ಮೀನು ಕೃಷಿಕರಿಗೆ ಸರಬರಾಜು ಮಾಡಲಾಗುತ್ತಿದೆ. ಮಂಡ್ಯ ಜಿಲ್ಲೆಯ ಮೀನು ಮರಿ ಅವಶ್ಯಕತೆಯನ್ನು ಪೂರೈಸುವಲ್ಲಿ, ಯಾವುದೇ ತೊಂದರೆ ಆಗಿರುವುದಿಲ್ಲ.

## ಬೆಂಗಳೂರು - ಮೈಸೂರು ಹೆದ್ದಾರಿಗೆ ಸ್ವಾಧೀನಗೊಳ್ಳುವ ಭೂಮಿಗೆ ಪರಿಹಾರ

4931 - ಶ್ರೀ ಎಂ.ಎಸ್. ಆತ್ಮಾನಂದ (ಮಂಡ್ಯ) : ಮಾನ್ಯ ಲೋಕೋಪಯೋಗಿ ಸಚಿವರು ಈ ಕೆಳಕಂಡ ಪ್ರಶ್ನೆಗಳಿಗೆ ದಯವಿಟ್ಟು ಉತ್ತರಿಸುವರೆ?

*ಅ) ಬೆಂಗಳೂರು - ಮೈಸೂರು ಹೆದ್ದಾರಿಗೆ ಭೂಸ್ವಾಧೀನ ಪ್ರಕ್ರಿಯೆಯಲ್ಲಿ ಸ್ವಾಧೀನಗೊಳ್ಳುವ ತಲಾ ಎಕರೆಗೆ ಭೂಸ್ವಾಧೀನದ ಮೊತ್ತವನ್ನು ನಿಗಧಿಪಡಿಸಲಾಗಿದೆಯೇ? (ಆದರ ವಿವರಗಳನ್ನು ನೀಡುವುದು)*

*ಆ) ಭೂಮಿ ಕಳೆದುಕೊಳ್ಳುವ ರೈತರಿಗೆ ಪುನರ್ವಸತಿ ಕಲ್ಲಿಸಲು ಉದ್ದೇಶಿಸಲಾಗಿದೆಯೇ?*

*ಇ) ಹಾಗಿದ್ದಲ್ಲಿ ಈ ಬಗ್ಗೆ ಕ್ರಮಗಳೇನು?*

ಶ್ರೀ ಧರಮ್ ಸಿಂಗ್ (ಲೋಕೋಪಯೋಗಿ ಸಚಿವರು) :

ಅ) ಬೆಲೆಯನ್ನು ಇನ್ನೂ ನಿಗಧಿಪಡಿಸಿಲ್ಲ.

ಆ) ಹೌದು.

ಇ) ಪುನರ್ವಸತಿ ಮತ್ತು ಪುನರ್ ನಿರ್ಮಾಣ (ಆರ್ ಅಂಡ್ ಆರ್) ಪ್ರಸ್ತಾವನೆಯನ್ನು ಕಂಪನಿಯು ಸಿದ್ಧಪಡಿಸುತ್ತಿದ್ದು ಸಧ್ಯದಲ್ಲೇ ಸರ್ಕಾರಕ್ಕೆ ಪ್ರಸ್ತಾವನೆಯನ್ನು ಸಲ್ಲಿಸುತ್ತದೆ.

## ಮೈಸೂರು ಸಕ್ಕರೆ ಕಾರ್ಖಾನೆ ಕಾರ್ಯನಿರ್ವಹಿಸಿರುವ ವಿಧಾನ

4932 - ಶ್ರೀ ಆತ್ಮಾನಂದ ಎಂ.ಎಸ್. (ಮಂಡ್ಯ) : ಮಾನ್ಯ ಪಶುಸಂಗೋಪನೆ ಮತ್ತು ಸಕ್ಕರೆ ಸಚಿವರು ಈ ಕೆಳಕಂಡ ಪ್ರಶ್ನೆಗಳಿಗೆ ದಯವಿಟ್ಟು ಉತ್ತರಿಸುವರೆ?